# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಬೆಂಗಳೂರು ನಗರ ಜಿಲ್ಲಾ ಪಂಚಾಯತಿಯ ವ್ಯಾಪ್ತಿಯ ತೋಟಗಾರಿಕೆ ಇಲಾಖೆಯ ಹಿರಿಯ ಸಹಾಯಕ ತೋಟಗಾರಿಕಾ ನಿರ್ದೇಶಕರ ಬಾಕಿ ವೇತನ ಪಾವತಿಗಾಗಿ ಅನುದಾನವನ್ನು ಬಿಡುಗಡೆಗೊಳಿಸುವ ಬಗ್ಗೆ

**ಓದಲಾಗಿದೆ:**

1. ಆರ್ಥಿಕ ಇಲಾಖೆ ವೆಚ್ಚ 4 ಶಾಖೆಯ ಕಡತ ಸಂಖ್ಯೆ: ಆಇ 246 ವೆಚ್ಚ 4/2021(ಇ)

**ಪ್ರಸ್ತಾವನೆ:**

ಬೆಂಗಳೂರು ನಗರ ಜಿಲ್ಲಾ ಪಂಚಾಯತಿ ವ್ಯಾಪ್ತಿಯ ತೋಟಗಾರಿಕೆ ಇಲಾಖೆಯಲ್ಲಿ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರಿಗೆ ಪೂರ್ವಾನ್ವಯವಾಗಿ ನಿರೀಕ್ಷಣಾ ಅವಧಿಯನ್ನು ಮಂಜೂರು ಮಾಡಲಾಗಿದ್ದು ಬಾಕಿ ವೇತನ ಪಾವತಿಗಾಗಿ ಅಗತ್ಯವಿರುವ ರೂ.7.32ಲಕ್ಷಗಳನ್ನು ಕಾರ್ಯಕ್ರಮದ ಲೆಕ್ಕ ಶೀರ್ಷಿಕೆ 2435-00-101-0-26-005ರಡಿ ಬಿಡುಗಡೆಗೊಳಿಸುವಂತೆ ಮೇಲೆ ಓದಲಾದ ಕಡತದಲ್ಲಿ ಪ್ರಸ್ತಾವಿಸಲಾಗಿದೆ.

ಪ್ರಸ್ತಾವನೆಯನ್ನು ಪರಿಶೀಲಿಸಿ ಜಿಲ್ಲಾ ಪಂಚಾಯತ್ ಕಾರ್ಯಕ್ರಮದಡಿಯ ಪ್ರಸ್ತಾವಿತ ವೆಚ್ಚಕ್ಕಾಗಿ ರೂ.77.32ಲಕ್ಷಗಳನ್ನು ಲೆಕ್ಕ ಶೀರ್ಷಿಕೆ 2515-00-196-1-05-300 ರಡಿ ಬಿಡುಗಡೆಗೊಳಿಸಲು ನಿರ್ಣಯಿಸಿ ಕೆಳಕಂಡಂತೆ ಆದೇಶಿಸಿದೆ.

## ಸರ್ಕಾರದ ಆದೇಶ ಸಂಖ್ಯೆ: ಆಇ 351 ವೆಚ್ಚ 6/2021(ಇ) ದಿನಾಂಕ: 12ನೇ ಜುಲೈ 2021

ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ ಈ ಆದೇಶಕ್ಕೆ ಲಗತ್ತಿಸಿರುವ ಅನುಬಂಧದ ಕಾಲಂ 2ರ ಜಿಲ್ಲಾ ಪಂಚಾಯತಿಗೆ ಕಾಲಂ 3 ಕಾರ್ಯಕ್ರಮದಡಿ ಬಾಕಿ ವೇತನ ಪಾವತಿಗಾಗಿ ಅಗತ್ಯವಿರುವ ಅನುದಾನವನ್ನು ಕಾಲಂ 4ರ ಲೆಕ್ಕ ಶೀರ್ಷಿಕೆಯಡಿ ರೂ7.32ಲಕ್ಷ (ರೂಪಾಯಿ ಏಳು ಲಕ್ಷದ ಮೂವತ್ತೆರಡು ಸಾವಿರಗಳು ಮಾತ್ರ) ಗಳನ್ನು ಬಿಡುಗಡೆಗೊಳಿಸಿದೆ.

(ಸೂಚನೆ: ಬಿಡುಗಡೆಗೊಳಿಸಿರುವ ಅನುದಾನವನ್ನು ನಿಧಿ-2ಕ್ಕೆ ಜಮೆ ಮಾಡಿಕೊಂಡು, ನಂತರ ಸಂಬಂಧಪಟ್ಟ ಜಿಲ್ಲಾ/ತಾಲ್ಲೂಕು ಪಂಚಾಯತಿ ಮುಖ್ಯಲೆಕ್ಕಾಧಿಕಾರಿಗಳು/ಕಾರ್ಯನಿರ್ವಾಹಕ ಅಧಿಕಾರಿಗಳು ಮರು ಹೊಂದಾಣಿಕೆ ಆದೇಶವನ್ನು ಈ ಕೆಳಗಿನ ಅಧಿಕಾರಿಗಳಿಗೆ ಸುತ್ತೋಲೆರನ್ವಯ ಪ್ರಸ್ತಾವನೆ ಆರ್ಥಿಕ ಇಲಾಖೆಗೆ ಸಲ್ಲಿಸಿ ಖಜಾನೆಯಲ್ಲಿ ಅಪ್ ಲೋಡ್ ಮಾಡಿಕೊಳ್ಳುವುದು

ಬಿಡುಗಡೆಗೊಳಿಸಿದ ಈ ಅನುದಾನವನ್ನು ಪ್ರಸ್ತಾವಿತ ವೆಚ್ಚವನ್ನು ಆದ್ಯತೆಯ ಮೇಲೆ ವೆಚ್ಚ ಮಾಡತಕ್ಕದ್ದು. ಯಾವುದೇ ಹಂತದಲ್ಲಿ ಅಂದರೆ ತಾಲ್ಲೂಕು ಪಂಚಾಯತಿ ಅಥವಾ ಅನುಷ್ಠಾನಾಧಿಕಾರಿಗಳ ಹಂತದಲ್ಲಿ ವಿಳಂಬವಾಗಿ ಅನುದಾನ ವ್ಯಪಗತವಾದಲ್ಲಿ ಮತ್ತೊಮ್ಮೆ ಅನುದಾನವನ್ನು ಒದಗಿಸುವುದಿಲ್ಲವೆಂದು ಮತ್ತು ವಿಳಂಬಗೊಳಿಸಿದ ಅಧಿಕಾರಿಗಳ ವಿರುದ್ಧ ನಿಯಮಾನುಸಾರ ಕ್ರಮವಹಿಸಲಾಗುವುದು.

| ಕ್ರ.ಸಂ. | ತಾಲ್ಲೂಕು ಪಂಚಾಯತ್ | ಕಾರ್ಯಕ್ರಮದ ಲೆಕ್ಕ ಶೀರ್ಷಿಕೆ | ಲೆಕ್ಕ ಶೀರ್ಷಿಕೆ 2515-00-196-1-05ರಡಿ ಬಿಡುಗಡೆಗೊಳಿಸಿದ ಅನುದಾನ (ರೂ.ಲಕ್ಷಗಳಲ್ಲಿ) |
|---|---|---|---|
| 1 | 2 | 3 | 4 |
| 1 | ಬೆಂಗಳೂರು ನಗರ | 2435-00-101-0-26-005 | 7.32 |

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ

(ಶ್ರೀಕೃಷ್ಣ ಎನ್. ಬುಗಟ್ಯಾಗೋಳ)
ವಿಶೇಷಾಧಿಕಾರಿ(ಜಿ.ಪಂ.) ಹಾಗೂ ಪದನಿಮಿತ್ತ
ಸರ್ಕಾರದ ಜಂಟಿ ಕಾರ್ಯದರ್ಶಿ
ಆರ್ಥಿಕ ಇಲಾಖೆ

2. ಮಹಾಲೇಖಪಾಲರು(ಎ&ಇ) ಲೆಕ್ಕ ಪರಿಶೋಧನೆ 1 & 2, ಕರ್ನಾಟಕ, ಬೆಂಗಳೂರು
3. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ಖಜಾನೆ-2, 7ನೇ ಮಹಡಿ, ವಾಣಿಜ್ಯ ತೆರಿಗೆ ಕಟ್ಟಡ, ಗಾಂಧಿನಗರ, ಬೆಂಗಳೂರು-2ರವರಿಗೆ
4. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ
5. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು/ಮುಖ್ಯ ಲೆಕ್ಕಾಧಿಕಾರಿಗಳು, ಜಿಲ್ಲಾ ಪಂಚಾಯತ್, ಬೆಂಗಳೂರು ನಗರ
6. ಜಂಟಿ ನಿರ್ದೇಶಕರು, ಖಜಾನೆ ಗಣಕಜಾಲ ನಿರ್ವಹಣಾ ಕೇಂದ್ರ, ಖನಿಜ ಭವನ, ಬೆಂಗಳೂರು
7. ಜಿಲ್ಲಾ ಖಜಾನಾಧಿಕಾರಿಗಳು, ಬೆಂಗಳೂರು (ನಗರ)
8. ರಕ್ಷಾ ಕಡತಕ್ಕೆ 9. ಹೆಚ್ಚುವರಿ ಪ್ರತಿ